**ಕರ್ನಾಟಕ ವಿಧಾನ ಪರಿಷತ್ತು**

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 761 (626)**
**ಮಾನ್ಯ ಸದಸ್ಯರ ಹೆಸರು : ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು)**
**ಉತ್ತರಿಸಬೇಕಾದ ದಿನಾಂಕ : 12 /12/2025**
**ಉತ್ತರಿಸುವವರು : ಮಾನ್ಯ ಕಾರ್ಮಿಕ ಸಚಿವರು**

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳು ಜಾರಿಯಾಗಿವೆ: (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಫಲಾನುಭವಿಗಳಾಗಿ ನೋಂದಾಯಿತರಾದ ಕಾರ್ಮಿಕರಿಗೆ ಹಲವಾರು ಕಾರ್ಮಿಕ ಕಲ್ಯಾಣ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಲಾಗುತ್ತಿದ್ದು, ಯೋಜನೆಗಳ ವಿವರ ಈ ಕೆಳಕಂಡಂತಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:**<br><br>ಈ ಮಂಡಳಿಯ ವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಭಿತರಿಗೆ ರೂಪಿಸಿರುವ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಒದಗಿಸಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br><br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ನೋಂದಾಯಿತರಾದ ಅಸಂಘಟಿತ ಕಾರ್ಮಿಕರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.<br>**ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ :**<br><br>ಈ ಯೋಜನೆಯಡಿ ಅಸಂಘಟಿತ ವಲಯದಡಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ವರ್ಗಗಳ ಕಾರ್ಮಿಕರು ಮತ್ತು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲಕಸುಬಿನ ವೃತ್ತಿ ಆಧಾರಿತ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟಾರೆ 101 ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ, ಈ ಕೆಳಕಂಡ ಸೌಲಭ್ಯಗಳನ್ನೊಳಗೊಂಡಂತೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. |
| ಆ) | ಕಟ್ಟಡ ಕಾರ್ಮಿಕರಿಗಾಗಿ ಇರುವ ವಿಶೇಷ ಯೋಜನೆಗಳಾವುವು; (ಸಂಪೂರ್ಣ ವಿವರ ಒದಗಿಸುವುದು) | |

**ದೊರಕುವ ಸೌಲಭ್ಯಗಳು:**

**ಅ) ಅಪಘಾತ ಪರಿಹಾರ ಸೌಲಭ್ಯ:**
ಅಪಘಾತದಿಂದ ಮರಣ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ ರೂ.1 ಲಕ್ಷ ಪರಿಹಾರ.

ಅಪಘಾತದಿಂದ ಶಾಶ್ವತ/ ಭಾಗಶಃ ದುರ್ಬಲತೆ ಹೊಂದಿದಲ್ಲಿ ರೂ.1.00 ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).

ಆಸ್ಪತ್ರೆ ವೆಚ್ಚ ಮರುಪಾವತಿ ರೂ.50,000/-ಗಳವರೆಗೆ. (ಅಪಘಾತ ಪ್ರಕರಣಗಳಲ್ಲಿ ಮಾತ್ರ)

**ಆ) ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚ:**

ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ.10,000/-ಗಳ ಧನ ಸಹಾಯ.

**ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:**

ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಸದರಿ ಕಾರ್ಮಿಕರನ್ನು ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.

**ದೊರಕುವ ಸೌಲಭ್ಯಗಳು:**

ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2.00 ಲಕ್ಷ ಹಾಗೂ ಜೀವ ವಿಮೆ ರೂ 2.00 ಲಕ್ಷ ಸೇರಿ ಒಟ್ಟು ರೂ.4.00 ಲಕ್ಷಗಳು.

ಅಪಘಾದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ
ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)
ಜೀವ ವಿಮಾ ರೂ.2.00 ಲಕ್ಷಗಳು.

**3.ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:**

ದಿನಪತ್ರಿಕೆ ಹಾಗೂ ಹಾಲು ವಿತರಿಸುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಸದರಿ ಕಾರ್ಮಿಕರನ್ನು ಮಂಡಳಿಯ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.

**ದೊರಕುವ ಸೌಲಭ್ಯಗಳು:**

ಅಪಘಾತದಿಂದ ಮರಣ ಹೊಂದಿದಲ್ಲಿ ರೂ2.00 ಲಕ್ಷ.
ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).
ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷಗಳವರೆಗೆ.

**4. ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ :**

ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ನಿರಂತರವಾಗಿ ಅಪಘಾತಗಳಿಗೆ ತುತ್ತಾಗಿ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಆದ್ದರಿಂದ, ಸದರಿ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಯೋಜನೆಯ ಸೌಲಭ್ಯಗಳು ಈ ಕೆಳಕಂಡಂತಿದೆ.

**ದೊರಕುವ ಸೌಲಭ್ಯಗಳು(ಅಪಘಾತ ಪರಿಹಾರ):**

ಮರಣ- ರೂ. 5.00 ಲಕ್ಷ,
ಶಾಶ್ವತ ದುರ್ಬಲತೆ-ರೂ. 2.00 ಲಕ್ಷದವರೆಗೆ,
ಆಸ್ಪತ್ರೆ ವೆಚ್ಚ ಮರುಪಾವತಿ- ರೂ.1.00 ಲಕ್ಷದವರೆಗೆ
ಶೈಕ್ಷಣಿಕ ಧನಸಹಾಯ ವಾರ್ಷಿಕ ರೂ.10,000/- (1ನೇ ತರಗತಿಯಿಂದ 12ನೇ ತರಗತಿ).

**5. ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**

ಅಸಂಘಟಿತ ವರ್ಗದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ

ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

**(ಅ) ಅಪಘಾತ ಪರಿಹಾರ ಸೌಲಭ್ಯ:**
ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.

ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.

ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷದವರೆಗೆ.

**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**
ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.

**(ಇ) ಶೈಕ್ಷಣಿಕ ಧನಸಹಾಯ :**

**(i)ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**
12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-

ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-

ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-

ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-

**(ii) ಅಪಘಾತದಿಂದ ನಿಧನರಾದ / ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**
1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ -

| | | |
|---|---|---|
| | | ವಾರ್ಷಿಕ ತಲಾ ರೂ.10,000/-<br>ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-<br>ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-<br>**(ಈ) ಹೆರಿಗೆ ಸಹಾಯ ಧನ:**<br>ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು.<br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಿಂದ ಸಂಘಟಿತ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/-ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಂದ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಆ ವಂತಿಗೆಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ |
| ಇ) | ಕಳೆದ 2 ವರ್ಷಗಳಲ್ಲಿ ಕಟ್ಟಡ ಕಾರ್ಮಿಕರಿಗೆ ಸರ್ಕಾರದ ವತಿಯಿಂದ ವೈದ್ಯಕೀಯ ಸೌಲಭ್ಯ ಮತ್ತು ಇತರೆ ಸೌಲಭ್ಯ ನೀಡಲು ಎಷ್ಟು ಅನುದಾನ ನಿಗದಿಪಡಿಸಲಾಗಿದೆ; ಖರ್ಚಾದ ಮೊತ್ತವೆಷ್ಟು? (ಜಿಲ್ಲಾವಾರು ಅಂಕಿ ಅಂಶಗಳೊಂದಿಗೆ ಮಾಹಿತಿ | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನ ಸ್ವೀಕೃತವಾಗುತ್ತಿರುವುದಿಲ್ಲ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಸ್ವೀಕೃತವಾಗುವ ಶೇ. 1 ರಷ್ಟು ಸುಂಕ ಮೊತ್ತವನ್ನು ಮಂಡಳಿಯ |

| | | |
|---|---|---|
| | ಒದಗಿಸುವುದು) | ಫಲಾನುಭವಿಗಳಿಗೆ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಬಳಸಲಾಗುತ್ತಿದೆ. ಮಂಡಳಿಯಿಂದ ನೀಡಲಾಗುತ್ತಿರುವ ಎಲ್ಲಾ ಸೌಲಭ್ಯಗಳು ಘಟನಾಧಾರಿತವಾಗಿದ್ದು ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿ ಸದರಿ ಸೌಲಭ್ಯವನ್ನು ಪಡೆದು ಕೊಳ್ಳುತ್ತಿದ್ದಾರೆ.<br><br>ಈ ಸುಂಕ ಮೊತ್ತದಿಂದ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲಾಗುತ್ತಿದೆ. ಕಳೆದ 02 ವರ್ಷದಲ್ಲಿ ವೈಧ್ಯ ಕೀಯ ಸೌಲಭ್ಯ ಮತ್ತು ಇತರೆ ಸೌಲಭ್ಯಗಳನ್ನು ನೀಡಲು ಮಂಡಳಿ ಆಯವ್ಯಯದಲ್ಲಿ ರೂ. 5098.39 ಕೋಟಿಗಳಷ್ಟು ಮೊತ್ತವನ್ನು ಮೀಸಲಿರಿಸಲಾಗಿದೆ.<br><br>ವಿವಿಧ ಸೌಲಭ್ಯಗಳಡಿ ಸಹಾಯ ಧನ ಬಿಡುಗಡೆ ಮಾಡಿರುವ ಜಿಲ್ಲಾವಾರು ವಿವರವನ್ನು **ಅನುಬಂಧ-02** ರಲ್ಲಿ ಒದಗಿಸಿದೆ |

**ಕಾಇ 479 ಎಲ್‌ಇಟಿ 2025**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-1

## ಮಂಡಳಿಯ ವತಿಯಿಂದ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ.20,000/- ವರೆಗೆ.**
8. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
9. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
10. **ಅಂತ್ಯಕ್ರಿಯೆ ವೆಚ್ಚ:ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.1,46,000**/- ಸಹಾಯಧನ.

| ಕ್ರ. ಸಂ. | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| **1** | 1ನೇ ತರಗತಿಯಿಂದ 5ನೇ ತರಗತಿ | **1,800/-** | - |
| **2** | 6ನೇ ತರಗತಿಯಿಂದ 8ನೇ ತರಗತಿ | **2,400/-** | - |
| **3** | 9 ಮತ್ತು 10ನೇ ತರಗತಿ | **3,000/-** | - |
| **4** | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | **6,000/-** | - |
| **5** | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್‌ಗಳು | **10,000/-** | - |
| **6** | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | **12,000/-** | - |
| **7** | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | **15,000/-** | **20,000/-** |
| **8** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ **Vocational** ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | **20,000/-** | **25,000/-** |
| **9** | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **10** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | **20,000/-** | **25,000/-** |

| | | | |
|---|---|---|---|
| **11** | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | **25,000/-** | **35,000/-** |
| **12** | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | **40,000/-** | **50,000/-** |
| **13** | ಪಿಹೆಚ್‌ಡಿ/ಎಂಫಿಲ್ (03 ವರ್ಷ ಅವಧಿಯವರೆಗೆ) | **40,000/-** | **-** |
| **14** | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | **50,000/-** | **60,000/-** |

11. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/- ರಿಂದ ರೂ.20,000/- ವರೆಗೆ.**
12. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-.**
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔಧ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
14. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-.**
15. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ.

# ಅನುಬಂಧ - 2

## ಮಂಡಳಿಯ ಫಲಾನುಭವಿಗಳಿಗೆ ಕಳೆದ 02 ವರ್ಷಗಳಲ್ಲಿ ವಿವಿಧ ಸೌಲಭ್ಯಗಳನ್ನು ವಿತರಿಸಿದ ಮಾಹಿತಿ

| | | 2023-24 | | 2024-25 | | TOTAL | |
|---|---|---|---|---|---|---|---|
| Sl No | District | Beneficiaries | Amount | Beneficiaries | Amount | Beneficiaries | Amount |
| 1 | Bangalore Urban | 267870 | 1001832572 | 38303 | 332856960 | 306173 | 1334689532 |
| 2 | Bangalore Rural | 39935 | 165312474 | 579 | 29035331 | 40514 | 194347805 |
| 3 | Belagavi | 83479 | 397324976 | 37844 | 345748294 | 121323 | 743073270 |
| 4 | Chikkamagaluru | 7197 | 130463087 | 2815 | 131609662 | 10012 | 262072749 |
| 5 | Davanagere | 49266 | 326486335 | 4485 | 192826816 | 53751 | 519313151 |
| 6 | Kalburgi | 40692 | 266732039 | 3525 | 261744309 | 44217 | 528476348 |
| 7 | Dharwad | 81377 | 437277770 | 37439 | 344067178 | 118816 | 781344948 |
| 8 | Dakshina Kannada | 78504 | 355245683 | 2260 | 108487899 | 80764 | 463733582 |
| 9 | Mysore | 11496 | 164170086 | 3905 | 157181879 | 15401 | 321351965 |
| 10 | Bagalkot | 39909 | 241380859 | 1394 | 118808706 | 41303 | 360189565 |
| 11 | Bellary/Vijayanagara | 73371 | 343194783 | 2317 | 116186440 | 75688 | 459381223 |
| 12 | Bidar | 38190 | 266257190 | 2437 | 277230115 | 40627 | 543487305 |
| 13 | Bijapur | 38103 | 227522861 | 2658 | 125886067 | 40761 | 353408928 |
| 14 | Chamarajanagar | 2263 | 66692050 | 1051 | 58601440 | 3314 | 125293490 |
| 15 | Chikkaballapura | 4281 | 111990055 | 1378 | 59494808 | 5659 | 171484863 |
| 16 | Chitradurga | 42295 | 257856079 | 3648 | 161351735 | 45943 | 419207814 |
| 17 | Gadag | 37832 | 227234914 | 34381 | 187045152 | 72213 | 414280066 |
| 18 | Hassan | 40499 | 237507696 | 2474 | 101490158 | 42973 | 338997854 |
| 19 | Haveri | 40364 | 316210890 | 2606 | 241930184 | 42970 | 558141074 |
| 20 | Uttara Kannada | 74989 | 383306838 | 1757 | 1190093182 | 76746 | 1573400020 |
| 21 | Kolar | 8047 | 134892850 | 12426 | 127693852 | 20473 | 262586702 |
| 22 | Koppala | 41641 | 250065016 | 7987 | 200745578 | 49628 | 450810594 |
| 23 | Madikeri | 1229 | 42096459 | 187 | 17315648 | 1416 | 59412107 |
| 24 | Mandya | 36111 | 155301813 | 34466 | 141849689 | 70577 | 297151502 |
| 25 | Raichur | 41567 | 255697632 | 6382 | 87025790 | 47949 | 342723422 |
| 26 | Ramanagara | 36884 | 181267147 | 2061 | 58260474 | 38945 | 239527621 |
| 27 | Shimoga | 43250 | 238635671 | 1912 | 152729674 | 45162 | 391365345 |
| 28 | Tumkur | 43835 | 270550836 | 7876 | 123900240 | 51711 | 394451076 |
| 29 | Udupi | 37356 | 212152435 | 868 | 76014127 | 38224 | 288166562 |
| 30 | Madhugiri | 0 | 0 | 33500 | 98557000 | 33500 | 98557000 |
| 31 | Yadgir | 37871 | 196414852 | 2428 | 101013280 | 40299 | 297428132 |
| | **Total** | **1419703** | **7861073948** | **297349** | **5726781667** | **1717052** | **13587855615** |